ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯ ಯುಜಿಡಿ ಕಾಮಗಾರಿ ಅನುಷ್ಠಾನ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು):-

147 (137) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರ ಸಭೆಯ ವ್ಯಾಪ್ತಿಯಲ್ಲಿ ಯುಜಿಡಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ;

(ಆ) ಸದರಿ ಕಾಮಗಾರಿಯು ಇದುವರೆಗೂ ಪೂರ್ಣಗೊಳ್ಳದಿರಲು ಕಾರಣಗಳೇನು;

(ಇ) ಸದರಿ ಕಾಮಗಾರಿಗೆ ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; ಖರ್ಚಾಗಿರುವ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?